ಆ) ಹಾಗಿದ್ದಲ್ಲಿ, ಸರ್ಕಾರ ಇಲ್ಲಿ ಐ.ಟಿ.ಐ. ಕಾಲೇಜು ತೆರೆಯಲು ಯೋಜನೆಯನ್ನೇನಾದರೂ ರೂಪಿಸಲಾಗಿದೆಯೇ;

ಇ) ಹಾಗಿದ್ದಲ್ಲಿ, ಎಂದು ಐ.ಟಿ.ಐ. ಕಾಲೇಜು ಮಂಜೂರು ಮಾಡಲಾಗುವುದು (ವಿವರ ನೀಡುವುದು)?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು):

ಅ) ಹೌದು.

ಆ) ಇಲ್ಲ.

ಇ) ಅನುದಾನದ ಲಭ್ಯತೆ ಆಧರಿಸಿ ಹಂತಹಂತವಾಗಿ ಅವಶ್ಯಕತೆಯ ಮೇರೆಗೆ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಸ್ವಾಸ್ಥ್ಯ ವಿಮಾ ಯೋಜನೆಯ ಅನುಷ್ಠಾನ

13 (21) ಶ್ರೀ ಈಶ್ವರ್ ಬೀಮಣ್ಣ ಖಂಡ್ರೆ (ಬಾಲ್ಕಿ): ಮಾನ್ಯ ಕಾರ್ಮಿಕ ಮತ್ತು ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಷ್ಟ್ರೀಯ ಸ್ವಾಸ್ಥ್ಯ ಬೀಮಾ ಯೋಜನೆಯನ್ನು ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ಹಾಗೂ ಈ ಯೋಜನೆಯ ಉಪಯೋಗಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಮತ್ತು ರೇಷ್ಮೆ ಸಚಿವರು):

ಅ) ರಾಜ್ಯದಲ್ಲಿ ರಾಷ್ಟ್ರೀಯ ಸ್ವಾಸ್ಥ್ಯ ಬೀಮಾ ಯೋಜನೆಯನ್ನು ಮೊದಲ ಹಂತದಲ್ಲಿ ಬೆಂಗಳೂರು ಗ್ರಾಮಾಂತರ, ದಕ್ಷಿಣ ಕನ್ನಡ, ಬೆಳಗಾವಿ, ಮೈಸೂರು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದ್ದು, ಇನ್ನುಳಿದ ಜಿಲ್ಲೆಗಳಿಗೂ ಈ ಯೋಜನೆಯನ್ನು ವಿಸ್ತರಿಸಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

1) ರಾಷ್ಟ್ರೀಯ ಸ್ವಾಸ್ಥ್ಯ ಬೀಮಾ ಯೋಜನೆಯು ಬಿಪಿಎಲ್ ಕುಟುಂಬದ ಕಾರ್ಮಿಕರಿಗೆ ಆರೋಗ್ಯ ವಿಮೆ ಒದಗಿಸುವ ಯೋಜನೆಯಾಗಿರುತ್ತದೆ.

2) ಬಿಪಿಎಲ್ ಕುಟುಂಬದ ಮುಖ್ಯಸ್ಥ, ಪತ್ನಿ ಮತ್ತು ಮೂರು ಜನ ಅವಲಂಬಿತರು (ಮಕ್ಕಳು ಸೇರಿದಂತೆ) ಒಟ್ಟು 5 ಮಂದಿ ವಾರ್ಷಿಕವಾಗಿ ರೂ.30,000/ ವರೆಗೆ ಒಳರೋಗಿಯಾಗಿ ವೈದ್ಯಕೀಯ / ಚಿಕಿತ್ಸೆ ಸೌಲಭ್ಯಗಳನ್ನು ಪಡೆಯಲು ಅರ್ಹರಿರುತ್ತಾರೆ.

3) ಗುರುತಿಸಿರುವ 700ಕ್ಕೂ ಹೆಚ್ಚು ರೋಗಗಳ ಬಗ್ಗೆ ನಗದು ರಹಿತವಾಗಿ ಚಿಕಿತ್ಸೆ ನೀಡುವ ಸೌಲಭ್ಯಗಳು ಇರುತ್ತವೆ.

4) ಬಿಪಿಎಲ್ ಕುಟುಂಬದ ಸದಸ್ಯರು ಚಿಕಿತ್ಸೆಗಾಗಿ ಆಸ್ಪತ್ರೆಗೆ ಭೇಟಿ ನೀಡಿದಾಗ ಪ್ರತಿ ಸಾರಿ ಚಿಕಿತ್ಸೆ ಪಡೆದುದಕ್ಕೆ ಸಾರಿಗೆ ವೆಚ್ಚಕ್ಕಾಗಿ ರೂ. 100/- ರಂತೆ ವಾರ್ಷಿಕ ಗರಿಷ್ಠ ರೂ. 1000/- ಪಡೆಯುವ ಸೌಲಭ್ಯವಿದೆ.

5) ಆಯ್ಕೆ ಮಾಡಲಾದ ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳಿಂದ ಯೋಜನೆಯಡಿ ಸ್ಮಾರ್ಟ್‌ಕಾರ್ಡ್ ಪಡೆದ ಬಿಪಿಎಲ್ ಕುಟುಂಬದವರು ಒಳರೋಗಿಯಾಗಿ ಚಿಕಿತ್ಸೆ ಪಡೆಯಬಹುದಾಗಿದೆ.

ನೇತ್ರಾವತಿ ತಿರುವು ಯೋಜನೆ

14 (9) ಶ್ರೀ ಶಿವಲಿಂಗೇಗೌಡ ಕೆ. ಎಂ. (ಅರಸೀಕೆರೆ): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೇತ್ರಾವತಿ ತಿರುವು ಯೋಜನೆಯಡಿ ಪರಮಶಿವಯ್ಯನವರ ವರದಿಯಲ್ಲಿ ಅರಸೀಕೆರೆ ಮತ್ತು ಇತರೆ ತಾಲ್ಲೂಕುಗಳಿಗೆ ನೀರಾವರಿ ಒದಗಿಸುವ ಯೋಜನಾ ಕಾರ್ಯ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಯೋಜನೆಯ ಅನುಷ್ಠಾನಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು?

ಶ್ರೀ ಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು):

ಅ) ಶ್ರೀ ಜಿ.ಎಸ್. ಪರಮಶಿವಯ್ಯನವರು ಪ್ರಸ್ತಾಪಿಸಿರುವ ಯೋಜನೆಯಡಿಯಲ್ಲಿ ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕು ಸೇರಿದಂತೆ ರಾಜ್ಯದ ಇನ್ನಿತರ ಬರಪೀಡಿತ ಜಿಲ್ಲೆಗಳಿಗೆ ಕುಡಿಯುವ ನೀರು ಹಾಗೂ ಅಂತರ್ಜಲ ಅಭಿವೃದ್ಧಿಡಿಸಲು ಯೋಜಿಸಲಾಗಿದೆ. ಈ ಯೋಜನೆಯ ಸಂಪೂರ್ಣ ವಿವರವಾದ ಯೋಜನಾ ವರದಿ ತಯಾರಿಸಲು ಕ್ರಮ ಜರುಗಿಸಲಾಗುತ್ತಿದ್ದು, ವಿವರವಾದ ಯೋಜನಾ ವರದಿ ತಯಾರಾದ ಮೇಲೆ ಯಾವ ತಾಲ್ಲೂಕು/ಪ್ರದೇಶಕ್ಕೆ ನೀರನ್ನು ಒದಗಿಸಲಾಗುವುದೆಂಬ ನಿಖರವಾದ ಮಾಹಿತಿ ಲಭ್ಯವಾಗುವುದು.

ಆ) ಶ್ರೀ ಜಿ.ಎಸ್. ಪರಮಶಿವಯ್ಯನವರ ಪ್ರಸ್ತಾವನೆಯಂತೆ ವಿವರವಾದ ಯೋಜನಾ ವರದಿಯ ತಯಾರಿಕೆಗಾಗಿ ಮೆ: ಎನ್.ಆರ್.ಎಸ್.ಸಿ. ಹೈದ್ರಾಬಾದ್‌ರವರಿಗೆ ದಿನಾಂಕ: 12-09-03ರಂದು ವಹಿಸಕೊಡಲಾಗಿತ್ತು. ಮೆ: ಎನ್.ಆರ್.ಎಸ್.ಸಿ., ಸಂಸ್ಥೆಯು ಮಾಲಾ ಕಾಲುವೆಯ ಸರ್ವೆ ಸಮೀಕ್ಷೆ ಮಾತ್ರ